# 2 ನೇ ಹೆಚ್ಚುವರಿ ಸಿವಿಲ್ ನ್ಯಾಯಾದೀಶರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಕುಂದಾಪುರ

ಅಸಲು ದಾವಾ ನಂಬ್ರಃ **315/2015** ಪಿಡಬ್ಲ್ಯೂ **-1**

ದಿನಾಂಕಃ **08-08-2018**

ಸಾಕ್ಷಿದಾರರ ಹೆಸರು - ಕೃಷ್ಣಯ್ಯ ಶೆಟ್ಟಿ
ತಂದೆಯ ಹೆಸರು - ತಿಮ್ಮಪ್ಪ ಶೆಟ್ಟಿ
ಪ್ರಾಯ - 69 ವರ್ಷ
ಉದ್ಯೋಗ - ಕೃಷಿ
ವಾಸ - ಉಳ್ತೂರು

ಪ್ರಮಾಣ ವಚನ ಮಾಡಿಸಲಾಯಿತು

ಮುಖ್ಯ ವಿಚಾರಣೆಃ ವಾದಿ ಪರ ವಕೀಲರಾದ ಶ್ರೀ ಟಿ. ಬಿ. ಎಸ್. ರವರಿಂದ

ನಾನು ಈ ದಾವಾದ ವಾದಿ .

ನಾನು ನನ್ನ ಪ್ರಮಾಣ ಪತ್ರವನ್ನು ಈ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಅದನ್ನು ನನ್ನ ಹೇಳಿಕೆ ಮೇರೆಗೆ ಬೆರಳಚ್ಚು ಮಾಡಲಾಗಿದೆ. ಅದರಲ್ಲಿ ಬರೆದಿರುವ ಎಲ್ಲಾ ವಿಚಾರಗಳನ್ನು ತಿಳಿದುಕೊಂಡು ನನ್ನ ಸಹಿ ಮಾಡಿರುತ್ತೇನೆ. ಅದನ್ನು ನನ್ನ ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಬೇಕಾಗಿ ಕೇಳಿಕೊಳ್ಳುತ್ತೇನೆ. ನಾನು ಈ ಕೆಳಕಂಡ ದಾಖಲಾತಿ ಗಳನ್ನು ಹಾಜರುಪಡಿಸಿರುತ್ತೇನೆ.

1. ಎರಡು ಆರ್.ಟಿ.ಸಿ.ಗಳನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಮತ್ತು ನಿಪಿ-2 ಎಂದು ಗುರುತಿಸಲಾಯಿತು.
2. ಮೂಲ ಮಾರಾಟ ಕರಾರು ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು ಗುರುತಿಸಲಾಯಿತು.
3. ಮೂಲ ಫಾರಂ ನಂ-7 ಅನ್ನು, ಭೂ ನ್ಯಾಯ ಮಂಡಳಿಯ ಆದೇಶ, ಫಾರಂ ನಂ.10 ಅನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-4 ರಿಂದ ನಿಪಿ-6 ಎಂದು ಗುರುತಿಸಲಾಯಿತು.
4. ವಾದಿ ತಹಶೀಲ್ದಾರರಿಗೆ ನೀಡಿದ ಅರ್ಜಿಯನ್ನು ನಿಪಿ-7 ಎಂದು ಗುರುತಿಸಲಾಯಿತು.
5. ವಿಭಾಗ ಪತ್ರದ ದೃಢೀಕೃತ ಪ್ರತಿಯನ್ನು ನಿಪಿ-8 ಎಂದು ಗುರುತಿಸಲಾಯಿತು.
6. ಕಂಡಿತ ಕ್ರಯ ಪತ್ರದ ದೃಢೀಕೃತ ಪ್ರತಿಯನ್ನು ನಿಪಿ9 ಎಂದು ಗುರುತಿಸಲಾಯಿತು.
7. ಸಹಾಯಕ ಕಮೀಶನರ್, ಕುಂದಾಪುರರವರು ನೀಡಿದ ಅದೇಶದ ಪ್ರತಿಯನ್ನು ನಿಪಿ-10 ಎಂದು ಗುರುತಿಸಲಾಯಿತು.

<u>ಪಾಟಿ ಸವಾಲುಃ ಪ್ರತಿವಾದಿ ಪರ ವಕೀಲರಾದ ಶ್ರೀ ಎಂ.ಎಂ.ಎಚ್. ರವರಿಂದ</u>

ಪ್ರತಿವಾದಿ ಪರ ವಕೀಲರು ಪಾಟಿ ಸವಾಲಿಗೆ ಸಮಯಾವಕಾಶ ಕೋರಿದ್ದರಿಂದ ಮುಂದೂಡಲಾಯಿತು

ಓದಿ ಹೇ, ಕೇ, ಸರಿ ಇದೆ.

ನನ್ನ ಹೇ. ಮೇ. ಬೆ. ಮಾಡಲಾಗಿದೆ

2 ನೇ ಹೆಚ್ಚುವರಿ ಸಿವಿಲ್ ನ್ಯಾಯಾದೀಶರು
ಮತ್ತು ಜೆ.ಎಂ.ಎಫ್.ಸಿ. ಕುಂದಾಪುರ